**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ: ಕೇಂದ್ರ ಕಛೇರಿ: ಬೆಂಗಳೂರು**

**ಸಂಚಾರ (ವಾಣಿಜ್ಯ) ಇಲಾಖೆ**

ಸಂ.ಕರಾಸಾ/ಕೇಕ/ಸಂ/ವಾ-1/1154/1178/19-20 ದಿನಾಂಕ:17.09.2019

**ಸುತ್ತೋಲೆ ಸಂಖ್ಯೆ:1511/2019**

**(ಸಂಚಾರ (ವಾಣಿಜ್ಯ) ಇಲಾಖೆಯಿಂದ ಹೊರಡಿಸಲ್ಪಟ್ಟಿದೆ)**

**ವಿಷಯ:** ಕ.ರಾ.ರ.ಸಾ ನಿಗಮದ ವ್ಯಾಪ್ತಿಯ ಆಸ್ತಿಗಳಲ್ಲಿ ಮೊಬೈಲ್ ಟವರ್ (Ground Based Masts) ಅಳವಡಿಸಲು ನಿಗದಿಪಡಿಸಿರುವ ಕನಿಷ್ಠ ಸ್ಥಳ ಪರಿಷ್ಕರಣೆ ಕುರಿತು.

**ಉಲ್ಲೇಖ:** 1. ಸಾಮಾನ್ಯ ಸ್ಥಾಯಿ ಆದೇಶ ಸಂಖ್ಯೆ: 787/2017 ದಿ:26-07-2017.
2. ಸುತ್ತೋಲೆ ಸಂಖ್ಯೆ 1460/2018 ದಿ:13.11.2018.
3. ಸೂಕ್ತಾಧಿಕಾರಿಗಳಾದ ವ್ಯವಸ್ಥಾಪಕ ನಿರ್ದೇಶಕರ ಅನುಮೋದನೆ ದಿನಾಂಕ 11-09-2019.

-&-

ನಿಗಮದ ವ್ಯಾಪ್ತಿಯ ಬಸ್ ನಿಲ್ದಾಣ / ಘಟಕ / ಕಛೇರಿ / ಇತರೆ ಆಸ್ತಿಗಳಲ್ಲಿ ಸಾರ್ವಜನಿಕ ಪ್ರಯಾಣಿಕರಿಗೆ ಹಾಗೂ ನಿಗಮದ ದೈನಂದಿನ ಸಾರಿಗೆಗಳ ಕಾರ್ಯಾಚರಣೆಗೆ ತೊಂದರೆಯಾಗದ ರೀತಿಯಲ್ಲಿ ಮೊಬೈಲ್ ಟವರ್ಸ್ (Ground Based Masts) ಅಳವಡಿಸಲು ಸಾಮಾನ್ಯ ಸ್ಥಾಯಿ ಆದೇಶ ಸಂಖ್ಯೆ 787/2017 ದಿನಾಂಕ 26.07.2018ರ ಅಂಶ ಸಂಖ್ಯೆ XXV ರನ್ವಯ ಕನಿಷ್ಠ 10' x 10' ವಿಸ್ತೀರ್ಣದ ತೆರೆದ ಸ್ಥಳವನ್ನು ಒದಗಿಸಲಾಗುತ್ತಿದೆ.

ಹೊಸ ತಂತ್ರಜ್ಞಾನದಡಿಯಲ್ಲಿ 5' x 5' ಅಳತೆಯ ಸ್ಮಾಲ್ ಸೆಲ್ ಮೊಬೈಲ್ ಟವರ್‌ಗಳನ್ನು ಅಳವಡಿಸಲಾಗುತ್ತದೆ. ಈ ನಿಟ್ಟಿನಲ್ಲಿ ಆಸಕ್ತದಾರರ ಮನವಿಯಂತೆ, ಪ್ರಸ್ತುತ ಮೊಬೈಲ್ ಟವರ್ಸ್‌ಗೆ ನಿಗದಿಪಡಿಸಿರುವ ಕನಿಷ್ಠ ವಿಸ್ತೀರ್ಣವನ್ನು ಪರಿಷ್ಕರಿಸಿ, 8' x 8'=64 ಚದರಡಿ ಸ್ಥಳವನ್ನು ಒದಗಿಸುವ ಪ್ರಸ್ತಾವನೆಗೆ ಸೂಕ್ತಾಧಿಕಾರಿಗಳಾದ ವ್ಯವಸ್ಥಾಪಕ ನಿರ್ದೇಶಕರು ಅನುಮೋದನೆ ನೀಡಿರುತ್ತಾರೆ. ಅದರಂತೆ ಮೊಬೈಲ್ ಟವರ್‌ಗಳಿಗೆ ಕನಿಷ್ಠ ವಿಸ್ತೀರ್ಣವನ್ನು ಮಾತ್ರ ಪರಿಷ್ಕರಿಸಿದ್ದು, ನಿಗದಿಪಡಿಸಿದ ದರಗಳು ಹಿಂದಿನಂತೆಯೇ ಮುಂದುವರೆಯುತ್ತವೆ. ಉಳಿದಂತೆ ಉಲ್ಲೇಖಿತ ಆದೇಶ / ಸುತ್ತೋಲೆಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

ಸದರಿ ಸುತ್ತೋಲೆಯು ತಕ್ಷಣದಿಂದಲೇ ಜಾರಿಗೆ ಬರುತ್ತದೆ. ಆದೇಶ ಸ್ವೀಕರಿಸಿ ಜಾರಿಗೊಳಿಸಿದ ಬಗ್ಗೆ ಅನುಸರಣಾ ವರದಿ ಕಳುಹಿಸುವುದು.

ಮುಖ್ಯ ಸಂಚಾರ ವ್ಯವಸ್ಥಾಪಕರು (ವಾ)

**ಪ್ರತಿಯನ್ನು ಗೌರವಪೂರ್ವಕವಾಗಿ:**

1) ವ್ಯವಸ್ಥಾಪಕ ನಿರ್ದೇಶಕರು, ಬೆಂಮಸಾಸಂಸ್ಥೆ / ವಾಕರಸಾಸಂಸ್ಥೆ / ಈಕರಸಾಸಂಸ್ಥೆ, ಬೆಂಗಳೂರು / ಹುಬ್ಬಳ್ಳಿ / ಕಲ್ಬುರ್ಗಿ ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
2) ಎಲ್ಲಾ ಇಲಾಖಾ ಮುಖ್ಯಸ್ಥರು, ಕ.ರಾ.ರ.ಸಾ.ನಿಗಮ. ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
3) ಮುಖ್ಯ ಸಂಚಾರ ವ್ಯವಸ್ಥಾಪಕರು, ಬೆಂಮಸಾಸಂಸ್ಥೆ / ವಾಕರಸಾಸಂಸ್ಥೆ / ಈಕರಸಾಸಂಸ್ಥೆ, ಬೆಂಗಳೂರು / ಹುಬ್ಬಳ್ಳಿ / ಕಲ್ಬುರ್ಗಿ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
4) ಎಲ್ಲಾ ವಿಭಾಗೀಯ ನಿಯಂತ್ರಣಾಧಿಕಾರಿಗಳು / ವಿಭಾಗೀಯ ಸಂಚಾರ ಅಧಿಕಾರಿಗಳು, ಕ.ರಾ.ರ.ಸಾ.ನಿಗಮ ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಲಾಗಿದೆ.
5) ಅಧ್ಯಕ್ಷರು / ಉಪಾಧ್ಯಕ್ಷರ ಆಪ್ತ ಕಾರ್ಯದರ್ಶಿಗಳು, ಕ.ರಾ.ರ.ಸಾ.ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.
6) ವ್ಯವಸ್ಥಾಪಕ ನಿರ್ದೇಶಕರು / ನಿರ್ದೇಶಕರು (ಭ ಮತ್ತು ಜಾ) / ನಿರ್ದೇಶಕರು (ಸಿ ಮತ್ತು ಪ) ರವರ ಹಿರಿಯ ಆಪ್ತ ಕಾರ್ಯದರ್ಶಿಗಳು, ಕ.ರಾ.ರ.ಸಾ. ನಿಗಮ, ಕೇಂದ್ರ ಕಛೇರಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಲಾಗಿದೆ.